# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬೆಂಗಳೂರು ಉತ್ತರ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಸರ್ಕಾರದ ನಿಯಮಗಳನ್ನು ಪಾಲಿಸದೆ 6510 ಸ್ವತ್ತುಗಳಿಗೆ ನಮೂನೆ-9 ಮತ್ತು ನಮೂನೆ-11ಬಿ ವಿತರಿಸಿ ರದ್ದು ಮಾಡಿರುವ ಬಗ್ಗೆ ತನಿಖಾ ಸಮಿತಿಯು ನೀಡಿರುವ ವರದಿಯ ಬಗ್ಗೆ.- ವಿಚಾರಣಾ ಅಧಿಕಾರಿಗಳನ್ನು ನೇಮಿಸುವ ಬಗ್ಗೆ.

**ಓದಲಾಗಿದೆ:-**

1. ಸರ್ಕಾರದ ಇದೇ ಸಮಸಂಖ್ಯೆಯ ಆದೇಶ ದಿನಾಂಕ:18-11-2015.
2. ಶ್ರೀ ಆರ್.ಬಿ. ಅಗವಾನೆ, ಭಾ.ಆ.ಸೇ., (ನಿವೃತ್ತ) ರವರ ನೇತೃತ್ವದ ತನಿಖಾ ಸಮಿತಿಯು ಸರ್ಕಾರಕ್ಕೆ ಸಲ್ಲಿಸಿರುವ ತನಿಖಾ ವರದಿ.

**ಪ್ರಸ್ತಾವನೆ:**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪಂಚತಂತ್ರ ತಂತ್ರಾಂಶ ಮತ್ತು ಇ-ಸ್ವತ್ತು ತಂತ್ರಾಂಶದಲ್ಲಿನ ವರದಿಯಂತೆ ಬೆಂಗಳೂರು ಉತ್ತರ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಯು ಹಾಗೂ ಕೆಲವು ಗ್ರಾಮ ಪಂಚಾಯಿತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳೊಂದಿಗೆ ಶಾಮೀಲಾಗಿ ಇ-ಸ್ವತ್ತು ತಂತ್ರಾಂಶದಲ್ಲಿ ನಮೂನೆ-9 ಹಾಗೂ 11ಬಿ ವಿತರಿಸಿ ನಡೆಸಿರುವ ಅವ್ಯವಹಾರಗಳ ಬಗ್ಗೆ ತನಿಖೆ ನಡೆಸುವಂತೆ ಜನ ಪ್ರತಿನಿಧಿಗಳು ಮತ್ತು ಸಾರ್ವಜನಿಕರು ಸರ್ಕಾರವನ್ನು ಕೋರಿದ್ದರಿಂದ, ಸರ್ಕಾರದ ನಿಯಮಗಳನ್ನು ಪಾಲಿಸದೆ 6510 ಸ್ವತ್ತುಗಳಿಗೆ ನಮೂನೆ-9 ಮತ್ತು ನಮೂನೆ-11ಬಿ ವಿತರಿಸಿ ರದ್ದು ಮಾಡಿರುವ ಬಗ್ಗೆ ನಿವೃತ್ತ ಭಾರತೀಯ ಆಡಳಿ ಸೇವೆ (ಐ.ಎ.ಎಸ್.,) ಅಧಿಕಾರಿಯಾದ ಶ್ರೀ ಆರ್.ಬಿ. ಅಗವಾನೆ ರವರ ನೇತೃತ್ವದಲ್ಲಿ ಮೇಲೆ ಓದಲಾದ ಕ್ರಮ ಸಂಖ್ಯೆ: (1)ರಲ್ಲಿ ತನಿಖಾ ಸಮಿತಿ ರಚನೆ ಮಾಡಿ ಆದೇಶಿಸಲಾಗಿತ್ತು.

ತನಿಖಾ ಸಮಿತಿ ವರದಿಯ ಪ್ರತಿಯನ್ನು ಅನುಬಂಧ-1 ರಲ್ಲಿ ಲಗತ್ತಿಸಿದೆ. ಸದರಿ ವರದಿಯಲ್ಲಿ ಬೆಂಗಳೂರು ಉತ್ತರ ತಾಲ್ಲೂಕಿನ ಅರಕೆರೆ, ಹುರುಳಿಚಿಕ್ಕನಹಳ್ಳಿ, ಮಾರೇನಹಳ್ಳಿ, ಬಾಗಲೂರು ಮತ್ತು ಹೆಸರಘಟ್ಟ ಗ್ರಾಮ ಪಂಚಾಯಿತಿಗಳಲ್ಲಿ ಇ-ಸ್ವತ್ತು ತಂತ್ರಾಂಶದ ಮೂಲಕ ಅನಧಿಕೃತವಾಗಿ ನಮೂನೆ-11ಬಿ ಗಳನ್ನು ನಿಯಮಬಾಹಿರವಾಗಿ ಸೃಷ್ಟಿಸುವ ಮೂಲಕ ವಿತರಿಸಿ ರದ್ದುಪಡಿಸಲು ಸದರಿ ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯಿತಿ ಸಿಬ್ಬಂದಿ ವರ್ಗದವರು ಸಮಾನ ಜವಾಬ್ದಾರರಾಗಿರುತ್ತಾರೆ ಎಂದು ತಿಳಿಸಿರುತ್ತದೆ ಹಾಗೂ ಸದರಿ ಗ್ರಾಮ ಪಂಚಾಯತಿಗಳ ಅಧ್ಯಕ್ಷರುಗಳು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿ ಹಾಗೂ ಡಾಟಾ ಎಂಟ್ರಿ ಆಪರೇಟರ್ ನೌಕರರು Criminal Intention and Cheating ಗೆ ಸಂಬಂಧಿಸಿದ ಕೃತ್ಯವೆಸಗಿದ್ದು, ಈ ಕೃತ್ಯವು ಭಾರತ ದಂಡ ಸಂಹಿತೆ ಕಲಂ 120(ಬಿ), 420, 474, 465 ಇವುಗಳ ಅಡಿ ಅಪರಾಧಿಕ ಕೃತ್ಯಗಳಾಗಿದ್ದು, ಈ ಬಗ್ಗೆ ಇವರ ವಿರುದ್ಧ ದೂರು ದಾಖಲಿಸುವಂತೆ ತಿಳಿಸಿರುತ್ತದೆ.

ಮುಂದುವರೆದು, ಉಪ ನೋಂದಣಾಧಿಕಾರಿಗಳು ದಾಖಲೆಗಳನ್ನು ಪರಿಶೀಲಿಸುವುದು ತಮ್ಮ ಜವಾಬ್ದಾರಿಯಲ್ಲವೆಂದು ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯ ಡಿಜಿಟಲ್ ಸಹಿಯನ್ನು ಮಾತ್ರ ಪರಿಗಣಿಸಿ ನೋಂದಣಿ ಮಾಡುತ್ತಿರುವುದಾಗಿ ತಿಳಿಸಿರುತ್ತಾರೆ. ಲ್ಯಾಂಡ್ ಡೆವಲಪರ್ಸ್ ನಿಯಮಗಳ ಅರಿವಿದ್ದರೂ ಅನಧಿಕೃತ ಬಡಾವಣೆ ನಿರ್ಮಿಸಿರುತ್ತಾರೆ. ಇದರಿಂದ ಲ್ಯಾಂಡ್ ಡೆವಲಪರ್ಸ್ ಮತ್ತು ಉಪನೋಂದಣಾಧಿಕಾರಿಗಳು ಶಾಮೀಲಾಗಿ ನೋಂದಣಿ ಮಾಡುವ ಮೂಲಕ ಖರೀದಿದಾರರನ್ನು ವಂಚಿಸಿರುವುದು ಕಂಡು ಬಂದಿರುವುದಾಗಿ ತಿಳಿಸಿರುತ್ತದೆ. ಹಾಗೂ ಲ್ಯಾಂಡ್ ಡೆವಲಪರ್ಸ್, ಕಂದಾಯ ಇಲಾಖೆಯ ಉಪನೊಂದಣಾಧಿಕಾರಿಗಳು, ತಹಶೀಲ್ದಾರ್, ರಾಜಸ್ವ ನಿರೀಕ್ಷಕರು, ಗ್ರಾಮ ಲೆಕ್ಕಾಧಿಕಾರಿಗಳು ಸ್ಥಳೀಯ ಮಟ್ಟದ ಅಧಿಕಾರಿಗಳಾಗಿದ್ದು, ಇವರ ಅಧಿಕಾರ ವ್ಯಾಪ್ತಿಯಲ್ಲಿರುವ ಹಸಿರು ವಲಯದಲ್ಲಿ ಹಾಗೂ ಕೃಷಿ ಭೂಮಿಯಲ್ಲಿ ಇಂತಹ ಕೃಷಿಯೇತರ ಚಟುವಟಿಕೆಗಳು ಇವರ ಗಮನಕ್ಕೆ ಬಂದರು ಸಹ ಉದ್ದೇಶಪೂರ್ವಕವಾಗಿ ನಿರ್ಲಕ್ಷ ವಹಿಸಿ, ಅನಧಿಕೃತ ಬಡಾವಣೆ ನಿರ್ಮಾಣಕ್ಕೆ ಪ್ರತ್ಯಕ್ಷ ಅಥವಾ ಪರೋಕ್ಷವಾಗಿ ಕಾರಣರಾಗಿದ್ದು, ಸದರಿಯವರ ವಿರುದ್ಧ ಅಪರಾಧಿಕ ಕೃತ್ಯಗಳಡಿ ದೂರು ದಾಖಲಿಸುವಂತೆ ಕ್ರಮ ವಹಿಸಲು ತಿಳಿಸಿರುತ್ತದೆ.

ತನಿಖಾ ಸಮಿತಿಯ ವರದಿಯ ಶಿಫಾರಸ್ಸುಗಳ ಮೇಲೆ ಸರ್ಕಾರದ ಆದೇಶದಂತೆ ಸಂಬಂಧಿಸಿದವರ ಮೇಲೆ ಹೊರಿಸಲಾದ ಆರೋಪಗಳ ಕುರಿತು ವಿಚಾರಣೆ ನಡೆಸಿ ಸರ್ಕಾರಕ್ಕೆ ವಿಚಾರಣಾ ವರದಿ ಸಲ್ಲಿಸಲು ಶ್ರೀಮತಿ ಬಿ.ಬಿ. ಕಾವೇರಿ, ಭಾ.ಆ.ಸೇ., ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೋಲಾರ ಮತ್ತು ಶ್ರೀ ಚಿಟಗುಪ್ಪಿ, ನಿವೃತ್ತ ಉಪ ಆಯುಕ್ತರು, ವಾಣಿಜ್ಯ ತೆರಿಗೆ ಇಲಾಖೆ ರವರನ್ನು ವಿಚಾರಣಾಧಿಕಾರಿಗಳನ್ನಾಗಿ ನೇಮಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 690 ಗ್ರಾಪಂಅ 2015,**
**ದಿನಾಂಕ:21-01-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ತನಿಖಾ ಸಮಿತಿಯು ಸಲ್ಲಿಸಿರುವ ವರದಿಯ ಶಿಫಾರಸ್ಸುಗಳ ಮೇಲೆ ಸರ್ಕಾರದ ಆದೇಶದಂತೆ ಕ್ರಮದ ನಂತರ ಸಂಬಂಧಿಸಿದವರ ಮೇಲೆ ಹೊರಿಸಲಾದ ಆರೋಪಗಳ ಕುರಿತು ವಿಚಾರಣೆ ನಡೆಸಿ ಸರ್ಕಾರಕ್ಕೆ ವಿಚಾರಣಾ ವರದಿ ನೀಡಲು ಶ್ರೀಮತಿ ಬಿ.ಬಿ. ಕಾವೇರಿ, ಭಾ.ಆ.ಸೇ., ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೋಲಾರ ಮತ್ತು ಶ್ರೀ ಚಿಟಗುಪ್ಪಿ, ನಿವೃತ್ತ ಉಪ ಆಯುಕ್ತರು, ವಾಣಿಜ್ಯ ತೆರಿಗೆ ಇಲಾಖೆ ರವರನ್ನು ವಿಚಾರಣಾಧಿಕಾರಿಗಳನ್ನಾಗಿ ನೇಮಿಸಿ ಸರ್ಕಾರವು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಶ್ರೀಮತಿ ಬಿ.ಬಿ. ಕಾವೇರಿ, ಭಾ.ಆ.ಸೇ., ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೋಲಾರ.
2. ಶ್ರೀ ಚಿಟಗುಪ್ಪಿ, ನಿವೃತ್ತ ಉಪ ಆಯುಕ್ತರು, ವಾಣಿಜ್ಯ ತೆರಿಗೆ ಇಲಾಖೆ.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ನಗರ ಜಿಲ್ಲೆ.
4. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ.

**ಪ್ರತಿಗಳು:-**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತರಾಜ್ ಇಲಾಖೆ
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ
3. ಹೆಚ್ಚುವರಿ ಪ್ರತಿ / ಶಾಖಾ ರಕ್ಷಾ ಕಡತ.
4. ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.